**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ.2151/2024</u>**

| | | |
|---|---|---|
| ಸಾಕ್ಷಿದಾರರ ಹೆಸರು | : ರಾಜು | ಪ್ರಾಸಾ-1 |
| ತಂದೆಯ ಹೆಸರು | : ವೀರಮುತ್ತು | ಚಾಸಾ-1 |
| ವಯಸ್ಸು | : 29 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 04.02.2026 |
| ವಾಸಸ್ಥಳ | : ಸಕಲೇಶಪುರ | |

**<u>:ಮುಖ್ಯ ವಿಚಾರಣೆ: ಪ್ರಾಜ್ಞ್ಯಾ ಸ.ಸ.ಅ. ರವರಿಂದ:</u>**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-2 ರಿಂದ 5 ರವರ ಪರಿಚಯ ನನಗಿಲ್ಲ.

ಸಾಕ್ಷಿಯು ದಿ.05.10.2024 ರಂದು ನೀಡಿದ ದೂರು ಮತ್ತು ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದೂರನ್ನು ನಿಪಿ-1 ಮತ್ತು ಸಾಕ್ಷಿಯು ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ದಿ.07.10.2024 ರಂದು ಬರವಣಿಗೆ ಮಾಡಿದ ಮಹಜರ್ ನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಮಹಜರ್ ಪ್ರತಿಯನ್ನು ನಿಪಿ-2 ಮತ್ತು ಸಾಕ್ಷಿಯು ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಒಂದು ಫೋಟೋವನ್ನು ತೋರಿಸಲಾಗಿ ಅದರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸಿದ ಮೇರೆಗೆ ಸದರಿ ಫೋಟೋವನ್ನು ನಿಪಿ-3 ಎಂದು ಗುರುತಿಸಲಾಯಿತು.

ನಿಪಿ-1 ಮತ್ತು 2 ಕ್ಕೆ ಯಾವ ಸಮಯದಲ್ಲಿ ಸಹಿ ಮಾಡಿರುತ್ತೇನೆ ಎಂದು ನನಗೆ ಮಾಹಿತಿ ಇರುವುದಿಲ್ಲ ಮತ್ತು ಅದರಲ್ಲಿ ಏನನ್ನು ನಮಾದಿಸಲಾಗಿರುತ್ತದೆ ಎಂದು ನನಗೆ ಮಾಹಿತಿ ಇರುವುದಿಲ್ಲ. ನಿಪಿ-3 ನ್ನು ಯಾರು ಮತ್ತು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ನನಗೆ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**<u>ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:</u>**

ಸಾಕ್ಷಿಗೆ ನಿಪಿ-1 ಮತ್ತು 2 ರಲ್ಲಿರುವ ಸಂಪೂರ್ಣ ಮಾಹಿತಿಯನ್ನು ಓದಿ ಹೇಳಲಾಗಿ ಸಾಕ್ಷಿಯು ಸಂಪೂರ್ಣವಾಗಿ ಅಲ್ಲಗಳೆದಿರುತ್ತಾರೆ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>**
**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

C/c ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.